ದಿನಾಂಕ 11.04.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ- ಪ್ರತಿವಾದಿ ಪರ ವಕೀಲರಿಂದಃ-

ನಾನು ಈ ದಾವೆಯಲ್ಲಿ ಪ್ರತಿವಾದಿ ಪರ ಸಾಕ್ಷಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದಲ್ಲಿ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿದೆ.

ಹೆಣ್ಣೂರು ಪೋಲೀಸ್ ಠಾಣೆಯ ಪೋಲೀಸ್ ಉಪನಿರೀಕ್ಷಕರು ನನಗೆ ನೀಡಿದ ಮನವಿ ಮತ್ತು ಮೈಸೂರು ನಗರಾಭಿವೃದ್ದಿ ಪ್ರಾಧಿಕಾರದ ಕಾರ್ಯದರ್ಶಿಯವರು ನನಗೆ ನೀಡಿದ ಮನವಿಯ ಪತ್ರದ ನೋಟರಿ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು (ಮೂಲ ಪ್ರತಿಗಳೊಂದಿಗೆ ತಾಳೆ ಮಾಡಿ ನೋಡಿ ಮೂಲ ಪ್ರತಿಗಳನ್ನು ಸಾಕ್ಷಿಗೆ ಹಿಂತಿರುಗಿಸಲಾಯಿತು) ಅವುಗಳನ್ನು ನಿಡಿ-8 ಮತ್ತು 9 ಎಂದು ಗುರುತಿಸಲಾಯಿತು. ಸಿ.ಸಿ.ಸಂಖ್ಯೆ1000/2011 ರಲ್ಲಿ ನೀಡಿದ ಸಾಕ್ಷ್ಯದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-10, ಸಿ.ಸಿ.ಸಂಖ್ಯೆ 1000/2011 ರಲ್ಲಿ ಸಲ್ಲಿಸಿದ ವರದಿ ಮತ್ತು ಲಗತ್ತಿಸಿದ ದಾಖಲೆಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಡಿ-11 ಎಂದು ಗುರುತಿಸಲಾಯಿತು.

ಶ್ರೀ ಸಿ ಕೆ ಪಿ ವಕೀಲರು ಹಾಜರಿದ್ದು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ:

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.